ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

BENGALURU NORTH UNIVERSITY

ಆಡಳಿತ ಕಛೇರಿ: ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ – 563 103.
ನಗರ ಕಛೇರಿ: ಜ್ಞಾನಜ್ಯೋತಿ ಭವನ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು – 560 001
ವೆಬ್‌ಸೈಟ್: http://bnu.ac.in ಇಮೇಲ್: registrar@bnu.ac.in bangalorenorthuniversity2017@gmail.com

ಸಂಖ್ಯೆ: ಬೆಂ.ಉ.ವಿ/ಶೈಕ್ಷಣಿಕ/ಸ್ನಾ.ಕೋ.ಪ್ರ/1408/2020-21 ದಿನಾಂಕ: 07.11.2020

# ಸ್ನಾತಕೋತ್ತರ ಪದವಿಗಳಿಗೆ ಪ್ರವೇಶಾತಿ ಅಧಿಸೂಚನೆ

2020-21ನೇ ಶೈಕ್ಷಣಿಕ ಸಾಲಿಗೆ ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ; ಸ್ನಾತಕೋತ್ತರ ಕೇಂದ್ರ, ಕೋಲಾರ ವಿಶ್ವವಿದ್ಯಾಲಯದ ವ್ಯಾಪ್ತಿಯ ವಿವಿಧ ಸಂಯೋಜಿತ ಕಾಲೇಜುಗಳಲ್ಲಿ ಲಭ್ಯವಿರುವ ಈ ಕೆಳಕಂಡ ಸ್ನಾತಕೋತ್ತರಪದವಿ (ಸಿಬಿಸಿಎಸ್ ಪದ್ಧತಿ)ಕೋರ್ಸುಗಳ ಪ್ರವೇಶಾತಿಗೆ ಅರ್ಜಿಗಳನ್ನು(ಸರ್ಕಾರದ ಆದೇಶವನ್ನು ಕಾಯ್ದಿರಿಸಿ) ಆಹ್ವಾನಿಸಿದೆ.

**ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಮತ್ತು ಸ್ನಾತಕೋತ್ತರ ಕೇಂದ್ರ, ಕೋಲಾರ ಇಲ್ಲಿ ಲಭ್ಯವಿರುವ ಸ್ನಾತಕೋತ್ತರ ಕೋರ್ಸುಗಳ ವಿವರ**

ಅ. **ಕಲಾ ನಿಕಾಯ:** ಎಂ.ಎ.– ಕನ್ನಡ, ಇಂಗ್ಲೀಷ್, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಹಾಗೂ ಸಮಾಜ ಕಾರ್ಯ (ಎಂ.ಎಸ್.ಡಬ್ಲ್ಯೂ).

ಆ. **ವಿಜ್ಞಾನ ನಿಕಾಯ:** ಎಂ.ಎಸ್ಸಿ.– ಗಣಿತಶಾಸ್ತ್ರ, ಗಣಕ ವಿಜ್ಞಾನ, ಸಸ್ಯಶಾಸ್ತ್ರ, ಭೌತಶಾಸ್ತ್ರ ಹಾಗೂ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ (ಎಂ.ಎಲ್.ಐ.ಎಸ್ಸಿ.).

ಇ. **ವಾಣಿಜ್ಯ ನಿಕಾಯ:** ಎಂ.ಕಾಂ.

**ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವಿವಿಧ ಸಂಯೋಜಿತ ಕಾಲೇಜುಗಳಲ್ಲಿ ಇರುವ ಸ್ನಾತಕೋತ್ತರ ಕೋರ್ಸುಗಳ ವಿವರ:**

ಅ. **ಕಲಾ ನಿಕಾಯ:** ಎಂ.ಎ.– ಕನ್ನಡ, ಇಂಗ್ಲೀಷ್, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಪತ್ರಿಕೋದ್ಯಮ ಮತ್ತು ಸಂವಹನ ಹಾಗೂ ಸಮಾಜ ಕಾರ್ಯ(ಎಂ.ಎಸ್.ಡಬ್ಲ್ಯೂ).

ಆ. **ವಿಜ್ಞಾನ ನಿಕಾಯ:** ಎಂ.ಎಸ್ಸಿ.– ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವ ರಸಾಯನಶಾಸ್ತ್ರ, ಗಣಿತಶಾಸ್ತ್ರ, ಪ್ರಾಣಿಶಾಸ್ತ್ರ, ಗಣಕ ವಿಜ್ಞಾನ, ಜೀವತಂತ್ರಜ್ಞಾನ, ಸೂಕ್ಷ್ಮಜೀವಶಾಸ್ತ್ರ, ಆಡಿಯೋಲಜಿ, ಸ್ಪೀಚ್ ಲಾಂಗ್ವೇಜ್ ಪೆಥಾಲಜಿ, ಆಡಿಯೋಲಜಿ ಅಂಡ್ ಸ್ಪೀಚ್ ಲಾಂಗ್ವೇಜ್ ಪೆಥಾಲಜಿ, ಮನಃಶಾಸ್ತ್ರ ಮತ್ತು ಸೈಕಾಲಜಿಕಲ್ ಕೌನ್ಸೆಲಿಂಗ್.

ಇ. **ವಾಣಿಜ್ಯ ಮತ್ತು ನಿರ್ವಹಣಾ ನಿಕಾಯ:** ಎಂ.ಕಾಂ.
ಸ್ವಹಣಗಳಿಕೆ ಸ್ನಾತಕೋತ್ತರ ಕೋರ್ಸುಗಳು: ಎಂ.ಕಾಂ. (ಫೈನಾನ್ಷಿಯಲ್ ಅನಾಲಿಸಿಸ್) ಮತ್ತು ಎಂ.ಟಿ.ಟಿ.ಎಂ.

ಈ. **ಶಿಕ್ಷಣ ನಿಕಾಯ:** ಎಂ.ಇಡಿ. (ಶಿಕ್ಷಣ)

**ಸೂಚನೆ:** 1. ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ವಿವಿಧ ಕಾಲೇಜುಗಳು ಮತ್ತು ಈ ಕಾಲೇಜುಗಳಲ್ಲಿ ಲಭ್ಯವಿರುವ ಸ್ನಾತಕೋತ್ತರ ಕೋರ್ಸುಗಳ ವಿವರಗಳನ್ನು ವೆಬ್‌ಸೈಟ್ http://bnu.ac.in ನಲ್ಲಿ ಪ್ರಕಟಿಸಲಾಗುವುದು.

2. ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಕರ್ನಾಟಕ ಸರ್ಕಾರ ಇವರು ನಡೆಸುವ ಕೇಂದ್ರ ಪ್ರವೇಶಾತಿ (ಪಿಜಿಸಿಇಟಿ) ಪ್ರಕ್ರಿಯೆ ಮುಖಾಂತರ ಪ್ರವೇಶಾತಿಯನ್ನು ಪಡೆಯುವುದು.

**ಇ. ಅರ್ಜಿಯನ್ನು ಸಲ್ಲಿಸಲು ಮಾರ್ಗಸೂಚಿಗಳು:**

1. ಅಭ್ಯರ್ಥಿಯು ಪ್ರವೇಶಾತಿಗೆ ಸಂಬಂಧಿಸಿದ ಅರ್ಹತಾ ಮಾನದಂಡಗಳು, ನಿಯಮಗಳು, ಶುಲ್ಕದ ಮಾಹಿತಿ ಹಾಗೂ ಇನ್ನಿತರ ಮಾಹಿತಿಗಳಿಗಾಗಿ ವಿಶ್ವವಿದ್ಯಾಲಯದ ವೆಬ್‌ಸೈಟ್ http://bnu.ac.in ಗೆ ಭೇಟಿ ನೀಡಲು ಸೂಚಿಸಲಾಗಿದೆ.
2. ಅರ್ಜಿಗಳನ್ನು ಆನ್‌ಲೈನ್ ಮುಖಾಂತರವೇ ಭರ್ತಿಮಾಡತಕ್ಕದ್ದು.
3. ಅಭ್ಯರ್ಥಿಗಳು ಅರ್ಜಿಯನ್ನು ತುಂಬಲು ಮೊಬೈಲ್ ಸಂಖ್ಯೆ ಹಾಗೂ ಇಮೇಲ್ ವಿಳಾಸದ ಮೂಲಕವೇ ನೋಂದಾಣಿ ಮಾಡಬೇಕಾಗಿರುವುದರಿಂದ ಮೊಬೈಲ್ ಸಂಖ್ಯೆ ಹಾಗೂ ಇಮೇಲ್ ವಿಳಾಸ ಕಡ್ಡಾಯವಾಗಿ ಬೇಕಾಗಿರುತ್ತದೆ. ಆದ್ದರಿಂದ ವೈಯಕ್ತಿಕ ಇ-ಮೇಲ್ ವಿಳಾಸ ಇಲ್ಲದ ಅಭ್ಯರ್ಥಿಗಳು ಇಮೇಲ್ ಮತ್ತು ಪಾಸ್‌ವರ್ಡ್‌ನ್ನು ಸೃಷ್ಟಿಸಿ ನೋಂದಣಿಯಾಗತಕ್ಕದ್ದು.
4. ಅಭ್ಯರ್ಥಿಯು ಒಂದಕ್ಕಿಂದ ಹೆಚ್ಚು ಕೋರ್ಸುಗಳಿಗೆ ಅರ್ಜಿಸಲ್ಲಿಸಲು ಬಯಸಿದ್ದಲ್ಲಿ ***ಒಂದೇ ಲಾಗಿನ್ ರುಜುವಾತು (Login Credential)***ನ್ನು ಬಳಸಿ ವಿವಿಧ ಕೋರ್ಸುಗಳನ್ನು ಆಯ್ಕೆಮಾಡಿ ಅರ್ಜಿ ಸಲ್ಲಿಸಬಹುದು.
5. ಅರ್ಜಿಯನ್ನು ಭರ್ತಿ ಮಾಡುವ ವಿಧಾನ ಹಾಗೂ ಮಾದರಿಯ ವಿಡಿಯೋ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ.
6. ಅರ್ಜಿ ಶುಲ್ಕ: ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರತಿ ಕೋರ್ಸಿಗೆ ರೂ. 220/- ಮತ್ತು ಪರಿಶಿಷ್ಟ ಜಾತಿ/ಪಂಗಡ, ಪ್ರವರ್ಗ-1 ಹಾಗೂ ವಿಶೇಷ ಚೇತನರಿಗೆ (PwD) ಅಭ್ಯರ್ಥಿಗಳು ಪ್ರತಿ ಕೋರ್ಸಿಗೆ ರೂ. 110/- ಗಳನ್ನು ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ ಪೇಮೆಂಟ್ ಗೇಟ್‌ವೇ(Payment Gateway) ಮುಖಾಂತರವೇ ಸಂದಾಯ ಮಾಡತಕ್ಕದ್ದು.
7. ಪ್ರತಿಯೊಂದು ಕೋರ್ಸಿಗೂ ಪ್ರತ್ಯೇಕ ಅರ್ಜಿ ಒಂದು ವಿಶಿಷ್ಟ ಸಂಖ್ಯೆಯೊಂದಿಗೆ ರಚಿಸಲ್ಪಡುತ್ತದೆ.
8. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಭರ್ತಿ ಮಾಡಿದ ಅರ್ಜಿಯ ಮುದ್ರಿತ ಪ್ರತಿಗಳ ಜೊತೆ ಸೀಟುಗಳ ಕೋರಿಕೆಗೆ ಬೇಕಾಗುವ ಎಲ್ಲಾ ಪೂರಕ ದಾಖಲೆಗಳನ್ನು (ದೃಢೀಕರಿಸಿದ) ಲಗತ್ತಿಸಿ, **ನೊಂದಾಯಿತ ಅಂಚೆಯ ಮುಖಾಂತರ** ಅಥವಾ **ಖುದ್ದಾಗಿ** ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ **ಕುಲಸಚಿವರ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಆಡಳಿತ ಕಟ್ಟಡ (ಶ್ರೀ ದೇವರಾಜ ಅರಸು ವೈದ್ಯಕೀಯ ವಿಶ್ವವಿದ್ಯಾಲಯದ ಎದುರು) ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ – 563 103** ಈ ವಿಳಾಸಕ್ಕೆ ಅರ್ಜಿಗಳನ್ನು ಕಳುಹಿಸತಕ್ಕದ್ದು.
9. ಭರ್ತಿ ಮಾಡಿದ ಅರ್ಜಿಗಳನ್ನು ನಿಗಧಿ ಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಅಥವಾ ತಲುಪುವ ಅರ್ಜಿಗಳನ್ನು ಹಾಗೂ ಅಪೂರ್ಣ ಅರ್ಜಿಗಳನ್ನು ಯಾವುದೇ ಮಾಹಿತಿ ನೀಡದೇ ಸಾರಸಗಟಾಗಿ ತಿರಸ್ಕರಿಸಲಾಗುವುದು.
10. ಮೇಲಿನ ವಿಷಯಗಳಿಗೆ ಸಂಬಂಧಪಟ್ಟಂತೆ ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಕುಲಸಚಿವರನ್ನು ಸಂಪರ್ಕಿಸಬಹುದು. ಇಮೇಲ್: bangalorenorthuniversity2017@gmail.com ಮತ್ತು registrar@bnu.ac.in. ವೆಬ್‌ಸೈಟ್: http://bnu.ac.in. **ಸಹಾಯವಾಣಿ ಸಂಖ್ಯೆ: 9449026413**

| **ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸುವ ಹಾಗೂ ಪ್ರವೇಶ ಪ್ರಕ್ರಿಯೆಯ ದಿನಾಂಕಗಳು:** | |
|---|---|
| ಅ) ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ದಿನಾಂಕ | **11.11.2020** |
| ಆ) ದಂಡ ಶುಲ್ಕವಿಲ್ಲದೆ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ | **23.11.2020** |
| ಇ) ರೂ. 200/- ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **30.11.2020** |
| ಈ) ಅರ್ಹತಾ ಪಟ್ಟಿ ಪ್ರಕಟಿಸುವ ದಿನಾಂಕ | **05.12.2020** |
| ಉ) ಅರ್ಹತಾ ಪಟ್ಟಿಯಲ್ಲಿನ ದೋಷಗಳ ಬಗ್ಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **09.12.2020** |
| ಊ) ಅಂತಿಮ ಅರ್ಹತಾ ಪಟ್ಟಿ ಪ್ರಕಟಿಸುವ ದಿನಾಂಕ | **12.12.2020** |
| ಋ) ಕಲಾ ಮತ್ತು ಶಿಕ್ಷಣ ವಿಭಾಗಗಳಿಗೆ ಪ್ರವೇಶ ಪ್ರಕ್ರಿಯೆ ದಿನಾಂಕಗಳು | ಪ್ರವೇಶ ಪ್ರಕ್ರಿಯೆಯ ದಿನಾಂಕಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು |
| ಎ) ವಿಜ್ಞಾನ ವಿಷಯಗಳಿಗೆ ಪ್ರವೇಶ ಪ್ರಕ್ರಿಯೆ ದಿನಾಂಕಗಳು | |
| ಏ) ವಾಣಿಜ್ಯ ಮತ್ತು ನಿರ್ವಹಣೆ ವಿಷಯಗಳಿಗೆ ಪ್ರವೇಶ ಪ್ರಕ್ರಿಯೆ ದಿನಾಂಕಗಳು | |

**ಸೂಚನೆ: ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗಗಳ ಕೋರ್ಸುಗಳಿಗೆ ಪ್ರವೇಶ ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಆದ್ಯತೆಯ ಮೇರೆಗೆ ಹಾಸ್ಟೆಲ್ ಸೌಲಭ್ಯವನ್ನು ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ ಇವರ ನಿಯಮಾನುಸಾರ ಕಲ್ಪಿಸಿಕೊಡಲಾಗುವುದು.**

7/11/2020

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕ, ಕೋಲಾರ - ಕರ್ನಾಟಕ - 563 103.